ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 33 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:04-02-2019.

ಇವರಿಂದ:
ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತಿಗಳು,

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಸಂಬಂಧಿಸಿದ ಆಸ್ತಿಗಳ ಖಾತೆ ಬದಲಾವಣೆ ಕಾರ್ಯ ನಿಯತಕಾಲದಲ್ಲಿ ಪೂರ್ಣಗೊಳಿಸಲು ಮಾಡಿರುವ ಶಿಫಾರಸ್ಸನ್ನು ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರವರ ಪತ್ರ ಸಂಖ್ಯೆ:ಕರಾವಮಂ/ಸಶಾ/07/2018-19, ದಿನಾಂಕ:27-11-2018.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು ಇವರು ಸರ್ಕಾರಕ್ಕೆ ಸಲ್ಲಿಸಿರುವ ಪತ್ರವನ್ನು ಇದರೊಂದಿಗೆ ಲಗತ್ತಿಸುತ್ತಾ, ಸದರಿ ಪತ್ರದಲ್ಲಿ ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ತನ್ನ ಹನ್ನೊಂದನೇ ವರದಿಯಲ್ಲಿ ರಾಜ್ಯದಲ್ಲಿ ವಕ್ಫ್ ಆಸ್ತಿಗಳ ಖಾತೆ ಬದಲಾವಣೆ ಕಾರ್ಯ ಕುಂಠಿತಗೊಂಡಿರುವ ಹಿನ್ನೆಲೆಯಲ್ಲಿ ವಿಶೇಷ ಆಂದೋಲನ ಹಮ್ಮಿಕೊಂಡು ನಿಯತಕಾಲದಲ್ಲಿ ಈ ಕಾರ್ಯ ಪೂರ್ಣಗೊಳಿಸಬೇಕೆಂದು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಹನ್ನೊಂದನೇ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತದೆ. ಹಾಲಿ ಇರುವ ಸಮಿತಿಯ ಈ ಶಿಫಾರಸ್ಸಿನ ಬಗ್ಗೆ ಅನುಪಾಲನಾ ವರದಿ ನೀಡಲು ನಿರ್ದೇಶಿಸಿರುತ್ತಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನ ಕಛೇರಿಗಳಲ್ಲಿ ಖಾತೆ ಬದಲಾವಣೆಗಾಗಿ ಬಾಕಿ ಇರುವ ತಾಲ್ಲೂಕುವಾರು ವಿವರಗಳನ್ನು ಕಳುಹಿಸಿ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅರೆ ಸರ್ಕಾರಿ ಪತ್ರದ ಮುಖಾಂತರ ಬಾಕಿ ಇರುವ ಎಲ್ಲಾ ವಕ್ಫ್ ಆಸ್ತಿಗಳ ಖಾತೆ ಬದಲಾವಣೆ ನಿಯತಕಾಲದಲ್ಲಿ ಮಾಡಿ ಅನುಪಾಲನಾ ವರದಿ ಸಲ್ಲಿಸುವಂತೆ ಸೂಕ್ತ ಸೂಚನೆ ನೀಡಲು ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿದ್ದು, ರಾಜ್ಯದ ಗ್ರಾಮ ಪಂಚಾಯತಿಗಳು ಮತ್ತು ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳ ಸಂರಕ್ಷಣೆ ಮಾಡಲು ದಿನಾಂಕ:07-12-2016 ರಂದು ಸುತ್ತೋಲೆ ಹೊರಡಿಸಲಾಗಿದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದಲ್ಲಿ ಸರ್ಕಾರಿ ಆಸ್ತಿ ಕೋಷ್ಟಕದಲ್ಲಿ ಸೇರಿಸಿ ಅನಧಿಕೃತ ಮಾರಾಟವನ್ನು ತಡೆಯಲು ದಿನಾಂಕ:24-03-2018 ರಂದು ಸುತ್ತೋಲೆ ಹೊರಡಿಸಲಾಗಿದೆ.

ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯು 11 ನೇ ವರದಿಯಲ್ಲಿನ ಶಿಫಾರಸ್ಸುಗಳ ಕ್ರಮ ಸಂಖ್ಯೆ 4 ರಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಕ್ಫ್ ಆಸ್ತಿಗಳ ತೆರಿಗೆ ನಿರ್ಧರಣೆ ಪಟ್ಟಿಗಾಗಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ವಿಶೇಷ ಆಂದೋಲನ ಹಮ್ಮಿಕೊಂಡು ಸೂಕ್ತ ಕಾಲಮಿತಿ ನಿಗದಿಪಡಿಸಿ ತೆರಿಗೆ ನಿರ್ಧರಣೆ ಪಟ್ಟಿ ಮಾಡುವ ಕಾರ್ಯವನ್ನು ತುರ್ತಾಗಿ ಪೂರ್ಣಗೊಳಿಸಬೇಕೆಂದು ಹಾಗೂ ಸಮರ್ಪಕ ದಾಖಲೆಗಳನ್ನು ಸಲ್ಲಿಸದಿರುವ ಪ್ರಕರಣಗಳಲ್ಲಿ ಅರ್ಜಿದಾರರಿಗೆ/ ವಕ್ಫ್ ಮಂಡಳಿಗೆ ಸಕಾಲದಲ್ಲಿ ಹಿಂಬರಹ ನೀಡಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಈಗಾಗಲೇ ನಿರ್ದೇಶನ ನೀಡಲಾಗಿದೆ.

ಆದುದರಿಂದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಕ್ಫ್ ಆಸ್ತಿಗಳ ತೆರಿಗೆ ನಿರ್ಧರಣೆ ಪಟ್ಟಿಗಾಗಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ವಿಶೇಷ ಆಂದೋಲನ ಹಮ್ಮಿಕೊಂಡು ಸೂಕ್ತ ಕಾಲಮಿತಿ ನಿಗದಿಪಡಿಸಿ ತೆರಿಗೆ ನಿರ್ಧರಣೆ ಪಟ್ಟಿ ಮಾಡುವ ಕಾರ್ಯವನ್ನು ತುರ್ತಾಗಿ ಪೂರ್ಣಗೊಳಿಸಬೇಕೆಂದು ಹಾಗೂ ಸಮರ್ಪಕ ದಾಖಲೆಗಳನ್ನು ಸಲ್ಲಿಸದಿರುವ ಪ್ರಕರಣಗಳಲ್ಲಿ ಅರ್ಜಿದಾರಿಗೆ/ ವಕ್ಫ್ ಮಂಡಳಿಗೆ ಸಕಾಲದಲ್ಲಿ ಹಿಂಬರಹ ನೀಡಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

4/2/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ನಂ.6 ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-560052.
2. ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ವಿಶೇಷ ಅಧಿಕಾರಿ, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.